**ಸಿವಿಲ್ ಜಡ್ಜ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಜೇವರ್ಗಿ**

| | |
|---|---|
| ಕ್ರಿಮಿನಲ್ ಪ್ರಕರಣ ಸಂಖ್ಯೆ | 661/2022 |

ದಿನಾಂಕ 16.12.2025 ರಂದು ಸಾಕ್ಷಿಗೆ ಕರೆಸಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಚಾಸಾಃ 6 ಪ್ರಾಸಾಃ 5

| | |
|---|---|
| ಹೆಸರು | ಅಮರಗುಂಡಪ್ಪ |
| ತಂದೆಯ ಹೆಸರು | ದುರುಗಪ್ಪ |
| ವಯಸ್ಸು | 32 ವರ್ಷಗಳು |
| ಉದ್ಯೋಗ | ಮುಖ್ಯ ಪೇದೆ |
| ವಾಸಸ್ಥಳ | ಯಡ್ರಾಮಿ |

**<u>ಮುಖ್ಯ ವಿಚಾರಣೆಃ ಸ ಸ ಅ ರವರಿಂದಃ</u>**

ನವೆಂಬರ್ 2021 ಇಲ್ಲಿಯವರೆಗೆ ನಾನು ಮುಖ್ಯ ಪೇದೆಯಾಗಿ ಯಡ್ರಾಮಿ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 20.02.2022 ರಂದು ಮಧ್ಯಾಹ್ನ 1.05 ರ ಸಮಯದಲ್ಲಿ ನಾನು ಠಾಣೆಯಲ್ಲಿ ಇದ್ದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ ಸಂಖ್ಯೆ 35/2022 ರಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಈಗ ನಾನು ದೂರನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-3 ಎಂದು ಮತ್ತು ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಅದೆ ದಿನ ಘಟನಾ ಸ್ಥಳಕ್ಕೆ ಬೇಟಿ ನೀಡಿ ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮ ಸಾಯಂಕಾಲ 4.30 ರಿಂದ 5.30 ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿ ಸದರಿ ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುಸಲಾಯಿತು.

ಅದೆ ದಿನ ಚಾಸಾ-4 ಮತ್ತು 6 ರವರ ಹೇಳಿಕೆಗಳನ್ನು ಬಿರಾಳ ಹಿಸ್ಸಾದಲ್ಲಿ ಪಡೆದಿರುತ್ತೇನೆ. ದಿನಾಂಕ 02.05.2022 ರಂದು ಆರೋಪಿತರಿಗೆ ಕಲಂ.41ಎ ರಡಿಯಲ್ಲಿ ಸೂಕ್ತ ಜಾಮೀನಿನ ಮೇಲೆ

ಬಿಡುಗಡೆ ಮಾಡಿರುತ್ತೇನೆ. ದಿನಾಂಕ 14.05.2022 ರಂದು ಗುನ್ನೆ ಜಾಗದ ಸರ್ವೆ ನಂ.47 ರ ಪಹಣಿಯನ್ನು ಚಾಸಾ-1 ರವರಿಂದ ಪಡೆದಿರುತ್ತೇನೆ. ಸಾಕ್ಷಿ ಪಹಣಿಯನ್ನು ನೋಡುತ್ತಿದ್ದು ಅದನ್ನು ಪಂಚನಾಮೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುಸಲಾಯಿತು. ದಿನಾಂಕ 14.05.2022 ರಂದು ರಂದು ತನಿಖೆ ಪೂರ್ಣಗೊಳಿಸಿ ಆರೋಪಿತರ ವಿರುದ್ದ ಆರೋಪ ಸಾಬೀತಾಗಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ.

<u>ಪಾಟೀ ಸವಾಲುಃ ಆಪಾದಿತರ ಪರ ವಕೀಲರಿಂದ:</u>

ಚಾಸಾ-1 ರವರು ದೂರು ನೀಡಿದ ನಂತರ ನಾನು ಘಟನಾ ಸ್ಥಳಕ್ಕೆ ಹೋಗಿ ವಿಚಾರಣೆ ಮಾಡಿರುತ್ತೇನೆ. ಚಾಸಾ-2 ರಿಂದ 5 ರವರು ಘಟನಾ ಸ್ಥಳದಲ್ಲಿದ್ದರು. ನಾನು ಘಟನಾ ಸ್ಥಳಕ್ಕೆ ಹೋದಾಗ ಆರೋಪಿತರು ಇರಲಿಲ್ಲ.

ಚಾಸಾ-1 ರವರ ಮಾತು ಕೇಳಿ ಸುಳ್ಳು ಪ್ರಕರಣ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಹೋಗದೆ ಠಾಣೆಯಲ್ಲಿ ಪಂಚನಾಮೆ ತಯಾರು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಸಂಪೂರ್ಣವಾಗಿ ತನಿಖೆ ಮಾಡದೆ, ಆರೋಪಿಗಳ ವಿರುದ್ದ ಯಾವುದೇ ಆರೋಪ ಸಾಬಿತಾಗದೆ ಇದ್ದರೂ ಸಹ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ಸಾಕ್ಷಿದಾರರು ಹೇಳಿದಂತೆ ನನ್ನ ಉಕ್ತ ಲೇಖನಕ್ಕೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ.ಕೇ. ಸರಿ ಇರುತ್ತದೆ

ಜೆ.ಎಮ್.ಎಫ್.ಸಿ.
ಜೇವರ್ಗಿ